**All India Radio: Bangalore**
**Regional Bulletin In Kannada**
**27.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.06.2026 / 2.30 p.m.**
**<><><><>**

ಮುಖ್ಯಾಂಶಗಳು

1. ಇಂದು ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಜಯಂತೋತ್ಸವ ; ಹಲವೆಡೆ ವಿವಿಧ ಕಾರ್ಯಕ್ರಮಗಳ ಆಯೋಜನೆ
2. ಕೆಂಪೇಗೌಡರ ಹೆಸರು ಶಾಶ್ವತಗೊಳಿಸಲು ಸರ್ಕಾರದಿಂದ ಜನಪರ ಯೋಜನೆಗಳ ಜಾರಿ ; ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
3. ತುಮಕೂರನ್ನು ಕ್ರೀಡಾನಗರಿಯನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಒತ್ತು ; ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
4. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಪಾದಚಾರಿ ಮಾರ್ಗ ತೆರವುಗೊಳಿಸಲು ಅಗತ್ಯಕ್ರಮ ; ಸಚಿವ ಕೃಷ್ಣಬೈರೇಗೌಡ

<><><><>

ಇಂದು ವಿಶ್ವವಿಖ್ಯಾತಿ ಬೆಂಗಳೂರು ನಗರದ ನಿರ್ಮಾತೃ, ದೂರದೃಷ್ಟಿಯ ಆಡಳಿತಗಾರ, ಕೆರೆಕಟ್ಟೆಗಳ ಹರಿಕಾರ ನಾಡಪ್ರಭು ಕೆಂಪೇಗೌಡರ ೫೧೭ನೇ ಜಯಂತ್ಯೋತ್ಸವ. ಇದರ ಅಂಗವಾಗಿ ವಿಧಾನಸೌಧ, ದೇವನಹಳ್ಳಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಮೆಜೆಸ್ಟಿಕ್- ಕೆಂಪೇಗೌಡ ನಿಲ್ದಾಣ ಸೇರಿದಂತೆ ಎಲ್ಲೆಡೆ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಸೇರಿದಂತೆ ವಿವಿಧ ಕಾರ್ಯಗಳು ಜರುಗುತ್ತಿವೆ. ಬೆಳಿಗ್ಗೆ ದೇವನಹಳ್ಳಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನದ ನಿಲ್ದಾಣದ ಬಳಿ ಇರುವ ನಾಡಪ್ರಭು ಕೆಂಪೇಗೌಡ ರವರ ಪ್ರತಿಮೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಲಾರ್ಪಣೆ ಮಾಡಿದರು. ಈ ವೇಳೆ ಮಾತನಾಡಿದ ಅವರು, ನಾಡಪ್ರಭು ಕೆಂಪೇಗೌಡರ ಪರಿಶ್ರಮವಿಲ್ಲದಿದ್ದರೆ ಇಂದು ಬೆಂಗಳೂರು ಇಷ್ಟು ಹೆಸರುವಾಸಿ ಆಗುತ್ತಿರಲಿಲ್ಲ. ಕೆಂಪೇಗೌಡರ ಹೆಸರು ಶಾಶ್ವತವಾಗಿ ಉಳಿಯಲು ಸರ್ಕಾರದಿಂದ ಯೋಜನೆಗಳನ್ನು ರೂಪಿಸುತ್ತಿದ್ದು, ಕೆಂಪೇಗೌಡರ ಹೆಸರಿನಲ್ಲಿ ಟೌನ್ ಪ್ಲಾನಿಂಗ್ ಕಾಲೇಜ್ ಮಾಡಲು

ತೀರ್ಮಾನಿಸಲಾಗಿದೆ. ಕೆಂಪೇಗೌಡರ ಭವನ ಬಗ್ಗೆ ಹೊಸ ನೀಲನಕ್ಷೆ ಸಿದ್ಧ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

**ಧ್ವನಿ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ (೩೩ ಸೆಕೆಂಡ್‌ಗಳು)**

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ ತಮ್ಮ ಈ ಪ್ರವಾಸದ ಅಂಗವಾಗಿ ಉಪರಾಷ್ಟ್ರಪತಿಯವರು ಇಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ನಾಡಪ್ರಭು ಕೆಂಪೇಗೌಡರ ೫೧೬ನೇ ಜಯಂತ್ಯುತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ, ಬೆಂಗಳೂರಿನಲ್ಲಿ ನಡೆಯಲಿರುವ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಭಾಗವಹಿಸಲಿದ್ದಾರೆ. ಈ ಸಮಾವೇಶವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ.

<><><><>

ಅಭಿವೃದ್ಧಿ ಹಾಗೂ ಟೌನ್‌ಶಿಪ್‌ಗಳ ನಿರ್ಮಾಣದ ಹೆಸರಿನಲ್ಲಿ ರೈತರಿಗೆ ತೊಂದರೆ ನೀಡದೆ, ಹಠಮಾರಿ ಧೋರಣೆ ಕೈಬಿಟ್ಟು ಜನರ ಭಾವನೆಗಳಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಂದಿಸಬೇಕು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಏಳೂವರೆ ಕೋಟಿ ಕನ್ನಡಿಗರ ಮುಖ್ಯಸ್ಥರ ಸ್ಥಾನದಲ್ಲಿರುವ ಮುಖ್ಯಮಂತ್ರಿಯವರು ವಾಸ್ತವಾಂಶದ ಮಾಹಿತಿಯನ್ನು ತರಿಸಿಕೊಂಡು ಪರಿಶೀಲಿಸಬೇಕು. ಯಾವುದೋ ಒಂದು ವಿಷಯಕ್ಕೆ ಹಠ ಹಿಡಿದು ಕೂರಬಾರದು. ಮುಖ್ಯಮಂತ್ರಿಯವರು ಬೆಂಗಳೂರು ಆನೇಕಲ್ ತಾಲೂಕಿನ ಜಿಗಣಿ, ಸರ್ಜಾಪುರ ಭಾಗಕ್ಕೆ ಒಮ್ಮೆ ಭೇಟಿ ನೀಡಿ, ವಸತಿ ಸಚಿವರಾಗಿದ್ದಾಗ ನಾವು ಮಾಡಿರುವ 'ಸೂರ್ಯನಗರ ೪ನೇ ಹಂತ'ದ ಪ್ರಧಾನಮಂತ್ರಿಗಳ ಟೌನ್‌ಶಿಪ್ ಅನ್ನು ವೀಕ್ಷಿಸಬೇಕು. ಅಂದು ಜನರ ಭಾವನೆಗಳಿಗೆ ನಾವು ಹೇಗೆ ಸ್ಪಂದಿಸಿದ್ದೆವು ಎಂಬುದನ್ನು ಗಮನಿಸಬೇಕೆಂದು ತಿಳಿಸಿದರು. ಯಾವುದೇ ಕಾರಣಕ್ಕೂ ರಾಜ್ಯದ ಮುಖ್ಯಮಂತ್ರಿಯಾಗಿ 'ನನ್ನದೇ ನಡೆಯಬೇಕು' ಎಂಬ ಹಠಕ್ಕೆ ಬೀಳಬಾರದು. ಜನರ ದುಃಖ-

ದುಮ್ಮಾನಗಳು ಹಾಗೂ ಅವರ ನಿರೀಕ್ಷೆಗಳಿಗೆ ಧಕ್ಕೆಯಾಗದಂತೆ, ಜನರಿಗೆ ಅನಾನುಕೂಲವಾಗದ ರೀತಿಯಲ್ಲಿ ಆಡಳಿತ ನಡೆಸುವಂತೆ ಕೇಂದ್ರ ಸಚಿವರು ಸಲಹೆ ನೀಡಿದರು.

<><><><>

ಶೈಕ್ಷಣಿಕ ನಗರಿಯಾಗಿರುವ ತುಮಕೂರನ್ನು ರಾಜ್ಯದ ಪ್ರಮುಖ ಕ್ರೀಡಾ ನಗರಿಯಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿವಿಧ ಕ್ರೀಡಾ ಮೂಲಸೌಕರ್ಯಗಳನ್ನು ಕಲ್ಪಿಸುತ್ತಿದ್ದು, ಕ್ರೀಡಾಪಟುಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಮೂಲಕ ಕ್ರೀಡೆಗೆ ಹೆಚ್ಚಿನ ಉತ್ತೇಜನ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಒಲಂಪಿಕ್ ದಿನದ ಅಂಗವಾಗಿ ಇಂದು ತುಮಕೂರಿನಲ್ಲಿ ಕರ್ನಾಟಕ ಒಲಂಪಿಕ್ ಸಂಸ್ಥೆ ಹಾಗೂ ಜಿಲ್ಲಾಡಳಿತ ಆಯೋಜಿಸಿದ್ದ "ಒಲಂಪಿಕ್ ಓಟ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಉಪಮುಖ್ಯಮಂತ್ರಿ, ತುಮಕೂರಿನಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ೪೨ ಎಕರೆ ಭೂಮಿಯನ್ನು ನೀಡಲಾಗಿದ್ದು, ಈಗಾಗಲೇ ಶಂಕುಸ್ಥಾಪನೆ ನೆರವೇರಿಸಲಾಗಿದೆ ಎಂದರು. ಇದಲ್ಲದೆ, ಜಿಲ್ಲೆಯ ಕ್ರೀಡಾಪಟುಗಳ ತರಬೇತಿಗಾಗಿ ರಾಷ್ಟ್ರೀಯ ಮಟ್ಟದ ಜಿಮ್ನೇಶಿಯಂ ನಿರ್ಮಿಸಲಾಗಿದೆ. ಮುಂದಿನ ದಿನಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾಂಗಣ ಹಾಗೂ ಅತ್ಯಾಧುನಿಕ ಈಜುಕೊಳವನ್ನು ನಿರ್ಮಿಸಲಾಗುವುದು. ಈಗಾಗಲೇ ಅಮಾನಿಕೆರೆಯಲ್ಲಿ ಕಯಾಕಿಂಗ್ ಅಕಾಡೆಮಿ ಆರಂಭಿಸಲಾಗಿದ್ದು, ಇಲ್ಲಿನ ತರಬೇತಿಯಿಂದ ಜಿಲ್ಲೆಯ ಮಕ್ಕಳು, ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸಂತಸ ವ್ಯಕ್ತಪಡಿಸಿದರು.

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಮುತ್ತತ್ತಿಯ ಕಾವೇರಿ ನದಿಯಲ್ಲಿ ಈಜಲು ಹೋಗಿ ಐದು ಮಂದಿ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸುರಕ್ಷತಾ ಕ್ರಮವಾಗಿ ಬ್ಯಾರಿಕೇಡ್‌ಗಳನ್ನು ಅಳವಡಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಸೂಚನೆ ನೀಡಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ಒಂದೇ ಕುಟುಂಬದ ಐವರು ಮುತ್ತತ್ತಿಯಲ್ಲಿ ಜಲಸಮಾಧಿ ಆಗಿದ್ದರು. ಭವಿಷ್ಯದಲ್ಲಿ ಈ ರೀತಿಯ ಅವಘಡಗಳು ಸಂಭವಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರು ನೀರಿಗಿಳಿಯಲು ನಿರ್ದಿಷ್ಟ ಸ್ಥಳ ಗುರುತಿಸಬೇಕು. ಅದನ್ನು ಹೊರತುಪಡಿಸಿ ಬೇರೆಡೆ ನೀರಿಗಿಳಿಯದಂತೆ ಕ್ರಮ ವಹಿಸಬೇಕು.

ಎಚ್ಚರಿಕಾ ನಾಮಫಕಗಳನ್ನು ಹಾಕಿ, ಗೈಡ್‌ಗಳನ್ನು ನಿಯೋಜಿಸುವಂತೆ ಸಚಿವ ರಾಮಲಿಂಗಾರೆಡ್ಡಿ ಸೂಚನೆ ನೀಡಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಪಾದಚಾರಿ ಮಾರ್ಗಗಳಲ್ಲಿ ಉಂಟಾಗಿರುವ ಒತ್ತುವರಿಗಳನ್ನು ಅಂಗಡಿ ಮಾಲೀಕರು ಸ್ವಯಂಪ್ರೇರಿತವಾಗಿ ತೆರವುಗೊಳಿಸಿಕೊಳ್ಳಲು ಜುಲೈ ೧ ರವರೆಗೆ ಅವಕಾಶ ನೀಡಲಾಗುವುದು. ನಂತರದಲ್ಲಿ "ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನ"ವನ್ನು ಆರಂಭಿಸಲಾಗುವುದು ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಬಿಎ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಹಾಗೂ ದುರಸ್ತಿ ಕಾಮಗಾರಿಗಳ ಕುರಿತು ಇಂದು ನಡೆದ ಸಭೆಯ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವರು, ಪಾದಚಾರಿ ಮಾರ್ಗದಲ್ಲಿ ನಡೆಯುವುದು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು ಎಂದು ಸರ್ವೋಚ್ಚ ನ್ಯಾಯಾಲಯ ಸ್ಪಷ್ಟಪಡಿಸಿದ್ದು, ಅದನ್ನು ಅನುಷ್ಠಾನಗೊಳಿಸಲು ಎಲ್ಲಾ ರಾಜ್ಯಗಳ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಿದೆ. ಅದರಂತೆ, ಮುಖ್ಯಮಂತ್ರಿಯವರು ಕೂಡ ಈ ವಿಷಯದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ಹಲವು ನಿರ್ದೇಶನಗಳನ್ನು ನೀಡಲಾಗಿದೆ ಎಂದು ಸಚಿವ ಕೃಷ್ಣಬೈರೇಗೌಡ ಹೇಳಿದರು.

<><><><>

ಭಾರತೀಯ ಚಾರ್ಟಡ್ ಅಕೌಂಟೆಂಟ್ಸ್ ಸಂಸ್ಥೆಯ ಜಿಲ್ಲಾ ಘಟಕ ಮತ್ತು ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಜಂಟಿಯಾಗಿ ಬಳ್ಳಾರಿಯಲ್ಲಿಂದು ಅಂತಾರಾಷ್ಟ್ರೀಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ-ಎಂ.ಎಸ್.ಎಂ.ಇ. ದಿನಾಚರಣೆಯನ್ನು ಹಮ್ಮಿಕೊಂಡಿತ್ತು. ಕಾರ್ಯಕ್ರಮ ಉದ್ಘಾಟಿಸಿದ ವಾಣಿಜ್ಯೋದ್ಯಮ ಸಂಘದ ಅಧ್ಯಕ್ಷ ಅವ್ವಾರು ಮಂಜುನಾಥ, ಗ್ರಾಮೀಣ ಮತ್ತು ನಗರ ಪ್ರದೇಶಗಳ ಆರ್ಥಿಕ ಅಂತರವನ್ನು ಕಡಿಮೆ ಮಾಡಿ ಉದ್ಯೋಗ ಸೃಷ್ಠಿಸುವಲ್ಲಿ ಎಂಎಸ್‌ಎಂಇಗಳ ಪಾತ್ರ ಮಹತ್ತರವಾದದ್ದು ಎಂದು ಹೇಳಿದರು. ಹಿರಿಯ ಲೆಕ್ಕಪರಿಶೋಧಕ ಸಿರಿಗೇರಿ ಪನ್ನಾರಾಜ್, ದೇಶದ ಒಟ್ಟು ಜಿಡಿಪಿಯಲ್ಲಿ ಶೇ.೩೦ ರಷ್ಟು, ಕೈಗಾರಿಕೆಗಳ ಒಟ್ಟ ಉತ್ಪಾದನೆಯಲ್ಲಿ ಶೇ ೩೬ ರಷ್ಟು, ರಫ್ತುನಲ್ಲಿ ಶೇ ೫೦ ರಷ್ಟು ಪಾಲು ಎಂ.ಎಸ್.ಎಂ.ಇ.ಉದ್ಯಮಗಳದಾಗಿದೆ ಎಂದು ತಿಳಿಸಿದರು. ಬಳ್ಳಾರಿ ಮೇಯರ್ ಪಿ. ಗಾದೆಪ್ಪ,

ವಾಣಿಜ್ಯೋದ್ಯಮ ಸಂಸ್ಥೆಯ ಆದಾಯ ತೆರಿಗೆ ಸಮಿತಿಯ ಅಧ್ಯಕ್ಷ ಕೆ. ರಾಜಶೇಖರ ಮಾತನಾಡಿ, ಸಣ್ಣ ಕೈಗಾರಿಕೆ ಮಹತ್ವವನ್ನು ವಿವರಿಸಿದರು.

<><><><>

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಾರುಕಟ್ಟೆ ಮಧ್ಯಪ್ರವೇಶ ಯೋಜನೆ ಪಿಡಿಪಿಎಸ್ ಅಡಿ ಪ್ರತಿ ಕ್ವಿಂಟಾಲ್ ತೋತಾಪುರಿ ಮಾವಿಗೆ ೧ ಸಾವಿರದ ೭೫೦ ರೂಪಾಯಿ ಬೆಲೆ ವ್ಯತ್ಯಾಸದ ಮೊತ್ತವನ್ನು ನಿಗದಿಪಡಿಸಿದ್ದು, ಕೋಲಾರ ಜಿಲ್ಲೆಯ ಮಾವು ಬೆಳೆಗಾರರ ಹಿತದೃಷ್ಟಿಯಿಂದ ಇಂದಿನಿಂದಲೇ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದ್ದಾರೆ. ಕೋಲಾರದಲ್ಲಿಂದು ಸುದ್ದಿಗಾರರೊಂದಿಗೆ ಅವರು, ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ತೋತಾಪುರಿ ಮಾವು ಬೆಳೆದ ರೈತರು, ತಮ್ಮ ಆಧಾರ್ ಸಂಖ್ಯೆಯೊಂದಿಗೆ ಆನ್‌ಲೈನ್ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

<><><><>

ಜಾಗತಿಕ ಕಚ್ಚಾ ತೈಲದ ಬೆಲೆಗಳು ಇಳಿಕೆಯಾಗಿರುವ ಹಿನ್ನೆಲೆಯಲ್ಲಿ, ಈ ವರ್ಷದ ಫೆಬ್ರವರಿ ತಿಂಗಳಲ್ಲಿ ಇದ್ದ ಮಟ್ಟಕ್ಕೆ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು ತಕ್ಷಣ ಇಳಿಸಬೇಕು ಎಂದು ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ. ಸಂಘದ ಅಧ್ಯಕ್ಷ  ಜಿ.ಕೆ. ಶೆಟ್ಟಿ ಮಾತನಾಡಿ, ಅಮೆರಿಕ-ಇರಾನ್ ಸಂಘರ್ಷದ ಪರಿಣಾಮ ಕೆಲತಿಂಗಳಿನಿಂದ ಜಾಗತಿಕ ಅನಿಲ ಸರಬರಾಜು ತೀವ್ರವಾಗಿ ವ್ಯತ್ಯಯಗೊಂಡಿದ್ದು, ಈಗ ಆ ಸಮಸ್ಯೆ ತಗ್ಗಿದೆ. ಜೊತೆಗೆ ಜಾಗತಿಕ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದೆ. ಈ ಹಿನ್ನೆಲೆಯಲ್ಲಿ, ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು ಮರುಪರಿಶೀಲಿಸಿ, ಜುಲೈ ತಿಂಗಳಿಂದಲೇ ಫೆಬ್ರವರಿ ತಿಂಗಳಲ್ಲಿ ಇದ್ದ ಮಟ್ಟಕ್ಕೆ ಇಳಿಸಬೇಕು. ಇದರಿಂದ ಹೋಟೆಲ್ ಉದ್ಯಮಕ್ಕೆ ಅತ್ಯಗತ್ಯವಾದ ಪರಿಹಾರ ದೊರೆಯಲಿದೆ" ಎಂದು ಅವರು ಕೋರಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>